117 (247) ಶ್ರೀ ಧ್ರುವನಾರಾಯಣ ಆರ್ (ಸಂತೇಮಾರಳ್ಳಿ) ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಮೀನುಗಾರಿಕಾ ಇಲಾಖೆಯಲ್ಲಿ 2006–07ನೇ ಸಾಲಿನಲ್ಲಿ ವಸತಿಹೀನ ಮೀನುಗಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸುವ ಯೋಜನೆ ಸರ್ಕಾರದ ಗಮನದಲ್ಲಿದೆಯೇ ,

ಆ) ಹಾಗಿದ್ದಲ್ಲಿ, ಸರ್ಕಾರ ಮಂಜೂರು ಮಾಡಿರುವ ಮನೆಗಳೆಷ್ಟು ,

ಇ) ಬಿಡುಗಡೆಯಾಗಿರುವ ಅನುದಾನವೆಷ್ಟು (ಜಿಲ್ಲಾವಾರು ವಿವರ ನೀಡುವುದು) ?

ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು)

ಅ) ಹೌದು

ಆ) ಮತ್ಸ್ಯಾಶ್ರಯ 3ನೇ ಹಂತದಡಿ 2006–07ನೇ ಸಾಲಿಗೆ 2660 ಮನೆಗಳನ್ನು ಸರ್ಕಾರವು ಮಂಜೂರು ಮಡಿದೆ

ಇ) ಅನುದಾನ ಬಿಡುಗಡೆ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ

118 (248) ಶ್ರೀ ಧ್ರುವನಾರಾಯಣ ಆರ್ (ಸಂತೇಮಾರಳ್ಳಿ) ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಕರ್ನಾಟಕ ರಾಜ್ಯ ಮೀನುಗಾರಿಕಾ ಮಹಾಮಂಡಳಿಯಿಂದ 2004–05, 2005–06, 2006–07ನೇ ಸಾಲುಗಳಲ್ಲಿ ಸರ್ಕಾರಕ್ಕೆ ಸಂದಾಯವಾದ ಹಣವೆಷ್ಟು ,

ಆ) ಈ ಮಹಾಮಂಡಳಿಯು ಸರ್ಕಾರ ಬೊಕ್ಕಸಕ್ಕೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು)

ಅ) ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕಾ ಮಹಾಮಂಡಳಿ (ನಿ), ಮೈಸೂರು ಇವರಿಂದ 2004–05, 2005–06 ಮತ್ತು 2006–07ನೇ ಸಾಲಿನಲ್ಲಿ ಕೆರೆಗಳ ಗುತ್ತಿಗೆ ಹಣದ ಬಾಬ್ತು ಕ್ರಮವಾಗಿ ರೂ 14 12 ಲಕ್ಷ,

ರೂ 28 46 ಲಕ್ಷ ಮತ್ತು ರೂ 21 98 ಲಕ್ಷಗಳನ್ನು ಮರು ಪಾವತಿಸಲಾಗಿದೆ ಸರ್ಕಾರಕ್ಕೆ ಪಾವತಿಸಬೇಕಾದ ಸಾಲ ಮತ್ತು ಬಡ್ಡಿ ಬಾಬ್ತು 2004–05, 2005–06 ಮತ್ತು 2006–07ನೇ ಸಾಲುಗಳಲ್ಲಿ ಮರುಪಾವತಿ ಮಾಡಿರುವುದಿಲ್ಲ

ಆ) ಈ ಮಹಾಮಂಡಳಿಯಿಂದ 31–03–2006ರ ಅಂತ್ಯಕ್ಕೆ ಸರ್ಕಾರಕ್ಕೆ ರೂ 54 32 ಲಕ್ಷ ಸಾಲ ಮತ್ತು ರೂ 159 23 ಲಕ್ಷ ಬಡ್ಡಿ ಮತ್ತು ದಂಡನಾ ಬಡ್ಡಿ ಒಟ್ಟು 213 55 ಲಕ್ಷಗಳು ಪಾವತಿಸಲು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೇ

ಇ) ಸರ್ಕಾರಕ್ಕೆ ಪಾವತಿಸಲು ಬಾಕಿ ಇರುವ ಸಾಲ ಮತ್ತು ಬಡ್ಡಿಯನ್ನು ಪಾವತಿಸುವಂತೆ ಮಹಾಮಂಡಳಿಗೆ ಸೂಚಿಸಲಾಗಿದೆ

119 (252) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಸರ್ಕಾರದಿಂದ ಅರ್ಹ ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಚೀಟಿ ವಿತರಿಸಿ 6 ತಿಂಗಳು ಕಳೆದರೂ ಈವರೆಗೆ ನೀಡಿದ ತಾತ್ಕಾಲಿಕ ಪಡಿತರ ಚೀಟಿಯಲ್ಲಿರುವ ಕುಂದು ಕೊರತೆಗಳನ್ನು ಸರಿಪಡಿಸಿ ಖಾಯಂ ಪಡಿತರ ಚೀಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಹಾಗಿದ್ದಲ್ಲಿ, ಖಾಯಂ ಪಡಿತರ ಚೀಟಿಯನ್ನು ಯಾವಾಗ – ವಿತರಣೆ ಮಾಡಲಾಗುವುದು ,

ಇ) ಬಡತನ ರೇಖೆಯಿಂದ ಮೇಲಿರುವ ನಾಗರೀಕರ ಪಡಿತರ ಚೀಟಿಗೆ ಹಿಂದೆ ನೀಡಲಾಗುತ್ತಿದ್ದ ಸೀಮೆಎಣ್ಣೆ ಸೌಲಭ್ಯವನ್ನು ರದ್ದುಪಡಿಸಿದ್ದರಿಂದ ರಾತ್ರಿ ವೇಳೆಯಲ್ಲಿ ವಿದ್ಯುತ್ ಕಡಿತ ಹಾಗೂ ಇತರೆ ಕಾರಣಗಳಿಂದ ರಾತ್ರಿ ವೇಳೆ ವಿದ್ಯುತ್ ಇಲ್ಲದೇ ಇದ್ದಾಗ ಇಂತಹವರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ,

ಈ) ಇಂತಹವರಿಗೆ ಕನಿಷ್ಟ 3 ಲೀಟರ್ ಸೀಮೆಎಣ್ಣೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು) ?

ಶ್ರೀ ಗೋವಿಂದ ಎಂ ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಹೌದು